ವಿಷಯ:- ಬೆಂಗಳೂರು ನಗರದಲ್ಲಿ ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ದಾಖಲಾಗಿರುವ ನಿರುದ್ಯೋಗಿಗಳ ಸಂಖ್ಯೆ ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 142(148)

ಶ್ರೀ ಆರ್.ವಿ.ದೇವರಾಜ್(ಚಾಮರಾಜಪೇಟೆ)

ಮಾನ್ಯ ಕಾರ್ಮಿಕ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ;

ಅ) ಬೆಂಗಳೂರು ನಗರದಲ್ಲಿ ವಿವಿಧ ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ದಾಖಲಾತಿಯಾಗಿರುವ ಒಟ್ಟು ನಿರುದ್ಯೋಗಿಗಳ ಸಂಖ್ಯೆ ಎಷ್ಟು? (ಜೂನ್ 1993ರ ಅಂತ್ಯದವರೆಗೆ);

ಆ) ಹಲವಾರು ಸರ್ಕಾರಿ ಕಛೇರಿಗಳಲ್ಲಿ ಹಾಗೂ ಇತರೆ ಸಂಸ್ಥೆಗಳಲ್ಲಿ ಈಗಾಗಲೇ ಕೆಲಸದಲ್ಲಿದ್ದು ಅವರ ಹೆಸರುಗಳನ್ನು ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ತೆಗೆದು ಹಾಕದೇ ಇರತಕ್ಕ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ನಿರುದ್ಯೋಗ ನಿವಾರಣೆಗೆ ಸಾರ್ಕರವು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು;

ಈ) ರಾಜ್ಯ ಸರ್ಕಾರದ ಉದ್ದಿಮೆಗಳು ಹಾಗೂ ಬೋರ್ಡ್, ಕಾರ್ಪೊರೇಷನ್‌ಗಳು ಉದ್ಯೋಗ ವಿನಿಮಯ ಕೇಂದ್ರದಿಂದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳದೇ ಜಾಹೀರಾತು ಮುಖಾಂತರ ಆಯ್ಕೆ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ ಎಲ್ಲಾ ಆಯ್ಕೆಗಳನ್ನೂ ಉದ್ಯೋಗ ವಿನಿಮಯ ಕೇಂದ್ರಗಳ ಮೂಲಕ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬ್ಲೇಸಿಯಸ್ ಎಂ. ಡಿಸೋಜ

(ಕಾರ್ಮಿಕರ ಸಚಿವರು)

ಬೆಂಗಳೂರು ನಗರದ ಉದ್ಯೋಗ ವಿನಿಮಯ ಕೇಂದ್ರಗಳ ದಾಖಲಾತಿಯಲ್ಲಿ 1993ನೇ ಜೂನ್ ಅಂತ್ಯಕ್ಕೆ 101623 ಮಹಿಳೆಯರು ಸೇರಿದಂತೆ 443737 ಅಭ್ಯರ್ಥಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಉದ್ಯೋಗಾಕಾಂಕ್ಷಿಗಳಾಗಿದ್ದರು.

ಸರ್ಕಾರಿ ಕಛೇರಿಗಳಲ್ಲಿ ಹಾಗೂ ಸಾರ್ವಜನಿಕ ಸಂಸ್ಥೆಗಳಲ್ಲಿ ಉದ್ಯೋಗ ಪಡೆದ, ಅಭ್ಯರ್ಥಿಗಳ ಬಗ್ಗೆ ಮಾಹಿತಿ ಉದ್ಯೋಗ ವಿನಿಮಯ ಕೇಂದ್ರಗಳಿಗೆ ಒದಗಿ ಬರುತ್ತಿದ್ದು ಅವರುಗಳ ನೋಂದಣಿಯನ್ನು ರದ್ದು ಮಾಡುವ ಕಾರ್ಯ ಜಾರಿಯಲ್ಲಿದೆ.

ಈ ವಿಷಯ ಉದ್ಯೋಗ ವಿನಿಮಯ ಕೇಂದ್ರದ ಕಾರ್ಯವ್ಯಾಪ್ತಿಗೆ ಬರುವುದಿಲ್ಲ.

ಬಂದಿದೆ.

ರಾಜ್ಯ ಸರ್ಕಾರದ ಉದ್ದಿಮೆ :ಸಂಸ್ಥೆಗಳಲ್ಲಿ 1250-00 ರೂ.ವರೆವಿಗೆ ಮೂಲ ವೇತನ ಹೊಂದಿರುವ ಹುದ್ದೆಗಳನ್ನು ಈಗಾಗಲೇ ಉದ್ಯೋಗ ವಿನಿಮಯ ಕೇಂದ್ರಗಳ ಕಕ್ಷೆಗೆ ಒಳಪಡಿಸಲಾಗಿದೆ.

ವಿಷಯ:- ಬೆಳಗಾವಿ ಸಂಕೇಶ್ವರ ಹಾಗೂ ಹುಕ್ಕೇರಿ, ನಿಪ್ಪಾಣಿ, ಚಿಕ್ಕೋಡಿ, ಸದಲಗಾ ಹಾಗೂ ಕುಡಚಿ ಪಟ್ಟಣಗಳಿಗೆ ಕುಡಿಯುವ ನೀರಿನ ಯೋಜನೆ ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 143(14)

ಶ್ರೀ ಮಲ್ಲಾರಿಗೌಡ.ಎಸ್.ಪಾಟೀಲ್(ಸಂಕೇಶ್ವರ)

ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?